## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

### ಜೂನ್ 2022 : ವಾರ್ಡ್ ಸಮಿತಿಯ 2ನೇ ಸಭೆಯ ನಡವಳಿಗಳು

************

ಉಲ್ಲೇಖ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 22-09-2021.

******

ದಿನಾಂಕ : 18-06-2022.

ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ

ಸಮಯ : ಪೂರ್ವಾಹ್ನ 10.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಮಾನ್ಯ ಮುಖ್ಯ ನಗರ ಯೋಜಕರು ಹಾಗೂ ನೋಡಲ್ ಅಧಿಕಾರಿಗಳು. |
| 2 | ಶ್ರೀ ರಮೇಶ್.ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ. |
| 3 | ಶ್ರೀ ಕುಮಾರ್ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 4 | ಶ್ರೀ ರವಿಕುಮಾರ್.ಎಸ್ | ಕಿರಿಯ ಆರೋಗ್ಯ ಪರಿವೀಕ್ಷಕರು, ಎಸ್.ಡಬ್ಲ್ಯೂಎಮ್ |
| 5 | ಶ್ರೀ ಧವಳೇಶ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ. |
| 6 | ಶ್ರೀ ಜ್ಞಾನೇಶ್ವರ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೀದಿ ದೀಪ |
| 7 | ಶ್ರೀ ಅಭಿಜೀತ್ | ಆರೋಗ್ಯ ಇಲಾಖೆ, ಗಿರಿನಗರ |
| 8 | ಶ್ರೀ ವಸಂತ್ ಕುಮಾರ್ | ಕಂದಾಯ ಇಲಾಖೆ, ಗಿರನಗರ |
| 9 | ಶ್ರೀ ಚಂದವಳ್ಳಿ | ಮಾರ್ಷಲ್, ಗಿರಿನಗರ ವಾರ್ಡ್ |
| 10 | ಶ್ರೀ ಎಸ್.ಎಂ.ಆರ್.ಪ್ರಸಾದ್ | ವಾರ್ಡ್ ಸದಸ್ಯರು-ಗಿರಿನಗರ. |
| 11 | ಶ್ರೀ ಆರ್ ಸತೀಶ್ | ವಾರ್ಡ್ ಸದಸ್ಯರು-ಗಿರಿನಗರ. |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಆದ ಶ್ರೀ ಸುನಿಲ್‌ಕುಮಾರ್.ಪಿ ರವರು ಸ್ವ ಪರಿಚಯ ಮಾಡಿಕೊಂಡು ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಗಿರಿನಗರ ವಾರ್ಡ್ ವ್ಯಾಪ್ತಿಯ ಬ್ಲಾಕ್ 9 ರಲ್ಲಿ ಆಟೋ ಟಿಪ್ಪರ್ ಸರಿಯಾದ ಸಮಯಕ್ಕೆ ಹೋಗುತ್ತಿರುವುದರಿಂದ ಕಸವನ್ನು ಎಲ್ಲೆಂದರಲ್ಲಿ ಬಿಸಾಡುವುದು ಕಡಿಮೆಯಾಗಿರುವುದಕ್ಕೆ ವಾರ್ಡ್ ಸದಸ್ಯರು ಮೆಚ್ಚುಗೆ ವ್ಯಕ್ತಪಡಿಸಿರುತ್ತಾರೆ.

2. ಗಿರಿನಗರ ವಾರ್ಡ್ ವ್ಯಾಪ್ತಿಯ ಮಂಜುನಾಥ ಸ್ವಾಮಿ ದೇವಸ್ಥಾನ ಹತ್ತಿರದ ಪಾರ್ಕ್ ಮತ್ತು ಅದರ ಸುತ್ತಾ ಸ್ವಚ್ಛತೆ ಕಾಪಾಡಿರುವುದಕ್ಕೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ವಾರ್ಡ್ ಸದಸ್ಯರು ಮೆಚ್ಚುಗೆ ವ್ಯಕ್ತಪಡಿಸಿರುತ್ತಾರೆ.

3. ಗಿರಿನಗರ ವಾರ್ಡ್ ವ್ಯಾಪ್ತಿಯ ಮುಖ್ಯಾಂಚಲಿ ಪಾರ್ಕ್‌ಗಳನ್ನು ಸ್ವಚ್ಛವಾಗಿಡುವಂತೆ ಸಭೆಯಲ್ಲಿ ಹಾಜರಿದ್ದ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

4. ವಾರ್ಡ್ ವ್ಯಾಪ್ತಿಯಲ್ಲಿನ ಪಾರ್ಕ್‌ಗಳಿಗೆ Children play equipments ಮತ್ತು Benches ಅಳವಡಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿರುತ್ತಾರೆ. ಹಾಗಾಗಿ ಆ ಕೆಲಸಗಳನ್ನು ಪ್ರಾಜೆಕ್ಟ್ ವತಿಯಿಂದ ಕೈಗೊಂಡು ಅವುಗಳನ್ನು ಅಳವಡಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

5. ವಾರ್ಡ್‌ನ ಬಿ.ಎಸ್.ಕೆ 3ನೇ ಹಂತ,4ನೇ ಬ್ಲಾಕ್, ಮತ್ತು 6ನೇ ಬ್ಲಾಕ್ ಶ್ರೀ ವಿದ್ಯಾನಗರ ಸುತ್ತಲಿನ ರಸ್ತೆಗಳಲ್ಲಿ ಮರಗಳನ್ನು ಟ್ರಿಮ್ ಮಾಡಲು ಅರಣ್ಯ ಇಲಾಖೆಯವರಿಗೆ ಸೂಚಿಸಲು ವಾರ್ಡ್ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

6. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ಸಮಸ್ಯೆ ಹೆಚ್ಚಾಗಿರುವುದು ಕಂಡು ಬಂದಿದ್ದು ಅದನ್ನು ರಿಪೇರಿ ಮಾಡತಕ್ಕದ್ದು ಅಥವಾ ಅವುಗಳನ್ನು ಬದಲಾಯಿಸುವ ಕೆಲಸವನ್ನು ಮಾಡಬೇಕೆಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು. ಅದಕ್ಕೆ ಬೀದಿ ದೀಪಗಳ ಅಭಿಯಂತರರು ಇನ್ನೂ 15 ದಿನಗಳ ಒಳಗಾಗಿ ಆ ಕೆಲಸವನ್ನು ಪೂರ್ಣಗೊಳಿಸುವುದಾಗಿ ಸಭೆಯ ಗಮನಕ್ಕೆ ತಂದಿರುತ್ತಾರೆ.

7. ವಾರ್ಡ್ ವ್ಯಾಪ್ತಿಯಲ್ಲಿನ ನಂದಗೋಕುಲ ಕಲ್ಯಾಣ ಮಂಟಪದ ಹತ್ತಿರ ಟ್ರಾನ್ಸ್‌ಫಾರ್ಮರ್ ರಿಪೇರಿ ಮತ್ತು ಶ್ರೀ ವಿದ್ಯಾನಗರ ಬಸ್ ನಿಲ್ದಾಣದ ಹತ್ತಿರ ಕೇಬಲ್ ಅಳವಡಿಸುವ ಕೆಲಸಗಳನ್ನು ಹಿಂದಿನ ಸಭೆಯಲ್ಲಿ ಸೂಚಿಸಿದ್ದರೂ ಸಹ ಕೆಲಸ ಮಾಡದಿರುವುದು ಅಧ್ಯಕ್ಷರ ಗಮನಕ್ಕೆ ಬಂದ ಕಾರಣ ಅವುಗಳನ್ನು ತ್ವರಿತಗತಿಯಲ್ಲಿ ಮುಗಿಸಿ ಮುಂದಿನ ಸಭೆಯಲ್ಲಿ ವರದಿ ನೀಡುವಂತೆ ಅಧ್ಯಕ್ಷರು ಸೂಚಿಸಿದರು.

8. ಮುನೇಶ್ವರ ಬ್ಲಾಕ್ 18 ನೇ ಮುಖ್ಯ ರಸ್ತೆಯಲ್ಲಿ ವಾಟರ್ ಸಪ್ಲೈ ಲೈನ್ ರಿಪೇರಿ ಕೆಲಸವು ತುರ್ತಾಗಿ ಆಗಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

9. ಗಿರಿನಗರ 2ನೇ ಫೇಸ್, 9ನೇ ಕ್ರಾಸ್‌ನಲ್ಲಿ ಅನಗತ್ಯವಾಗಿ ತೆಗೆಯಲಾಗಿದ್ದ ಗುಂಡಿಗಳನ್ನು ಮುಚ್ಚಿ Restoration ಮಾಡಲಾಗಿದೆ ಎಂದು ಸಭೆಯಲ್ಲಿ ಎಲ್ಲರ ಗಮನಕ್ಕೆ ವಾರ್ಡ್ ಅಭಿಯಂತರರು ತಿಳಿಸಿರುತ್ತಾರೆ.

10. 18ನೇ ಮುಖ್ಯ ರಸ್ತೆ ಮುನೇಶ್ವರ ಬ್ಲಾಕ್‌ನಲ್ಲಿ ನೀರಿನ ಸಮಸ್ಯೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಬಗೆಹರಿಸಿರುವ ಬಗ್ಗೆ ವಾರ್ಡ್ ಸದಸ್ಯರು ಸಭೆಯಲ್ಲಿ ಪ್ರಶಂಸೆ ವ್ಯಕ್ತಪಡಿಸಿರುತ್ತಾರೆ.

11. ಗಿರಿನಗರ 2ನೇ ಫೇಸ್, 9ನೇ ಅಡ್ಡ ರಸ್ತೆ ಮತ್ತು 11 ನೇ ಅಡ್ಡ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಒಳಚರಂಡಿ ಕೊಳವೆ ಬದಲಾಯಿಸಲು ಅಗೆದಿದ್ದ ರಸ್ತೆಯನ್ನು ಯಥಾಸ್ಥಿತಿಗೆ ತರಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

12. ವಾರ್ಡ್ ವತಿಯಿಂದ ಹೊಸದಾಗಿ ಕೊಳವೆ ಬೋರ್‌ವೆಲ್‌ಗಳನ್ನು ಕೊರೆಸದಿರಲು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

14. ಡಾ॥ ಅಭಿಜಿತ್ ರವರು ಮಾತನಾಡಿ ದಿ: 07.06.2022 ರಿಂದ ದಿ: 17.06.2022 ರವರೆಗೆ ಒಟ್ಟು 5 ಕೋವಿಡ್ ಪ್ರಕರಣಗಳು ಕಂಡುಬಂದಿದ್ದು ಎಲ್ಲರೂ ಸಹ ಮನೆಯಲ್ಲೇ ಚಿಕಿತ್ಸೆ ಪಡೆಯುತ್ತಿರುತ್ತಾರೆ ಎಂಬ ಮಾಹಿತಿಯನ್ನು ಮಾನ್ಯ ಅಧ್ಯಕ್ಷರ ಗಮನಕ್ಕೆ ತಂದಿರುತ್ತಾರೆ.

15. ಕಂದಾಯ ಮೌಲ್ಯ ಮಾಪಕರಾದ ಶ್ರೀ ವಸಂತ್ ಕುಮಾರ್‌ರವರು ವಾರ್ಡ್ ವ್ಯಾಪ್ತಿಯಲ್ಲಿ 6871 ನಿವೇಶನಗಳು ವಸೂಲಿ ವ್ಯಾಪ್ತಿಗೆ ಒಳಪಟ್ಟಿದ್ದು ಪ್ರಸ್ತುತ ಸದರಿ ನಿವೇಶನಗಳಿಂದ ರೂ.9.00 ಕೋಟಿಗಳಷ್ಟು ಬೇಡಿಕೆ ಇದ್ದು ಅದರಲ್ಲಿ ರೂ.5.40 ಕೋಟಿ ವಸೂಲಿ ಆಗಿದ್ದು ಬಾಕಿ ಉಳಿದ ಕಂದಾಯವನ್ನು ವಸೂಲಿ ಮಾಡಲಾಗುವುದು ಎಂದು ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಗಮನಕ್ಕೆ ತಂದಿರುತ್ತಾರೆ.

"ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು'.

18/06/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ. ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.